SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar
UNIVERSITY LIBRARY & LEARNING RESOURCE CENTRE
Online Newspaper Clipping Service
Dtd-Saturday, 20th, June- 2020
DECCAN HERALD
Page No.03

# Three medical students, one nurse contract novel coronavirus

## 8 people test positive within 24 hours in Kolar district

KOLAR, DHNS

A total of 8 people, including a nurse and medical students, tested positive for novel coronavirus in the district raising concern among health department officials in the district.

With the fresh cases, the number of people having the virus has now gone upto 25.

### Medical students contract virus

Three medical students of R L Jalapppa Hospital and Research Centre (RLJHRC), who were treating Covid-19 patients, have contracted the virus. A 26-year-old nurse from Guttukunte village in Srinivaspur taluk, who is employed at the Covid-19 ward at the district S N R Hospital has tested positive. She was treating an autorickshaw driver from Shaheen Nagar layout in Kolar.



Health department officials collect throat swab sample of a woman for coming in contact with a Covid-19 patient at Banahalli in Bangarpet taluk in Kolar district. DH PHOTO

### Cancer patient tests positive

A patient from Jangama Gurjenahalli under treatment for cancer at the RLJHRC has tested positive for the virus. It is not known who the patient contracted the virus.

### 10 quarantined in Bangarpet

Bangarpet taluk has reported two more fresh cases. A 20-year-old woman from Krishnagiri district in Tamil Nadu, who had come to her parental house at Banahalli in Bangarpet taluk, tested positive. She had come to Banahalli on June 15.

As she had come from a neighbouring district, her throat swab and blood samples were sent to a laboratory for a report which indicated that she had Covid-19.

Before the reports were received, she returned to her house at Krishnagiri. Ten people, who came in contact with her, have been quarantined.

A woman from Kuppanahalli in Bangarpet taluk has also tested positive. She had come in contact with her relative who had Covid-19. The relative, a resident of PWD quarters, tested positive for the virus on June 14. He had visited his in-laws' house at Kuppanahalli.

### Delhi returnee carries virus

A 25-year-old woman from New Delhi, who had recently visited Tukal Rampur in KGF taluk tested positive. She was under home quarantine. She was admitted to RLJHRC three days ago for fever.

She attended a wedding and came in contact with many people. Several people in the village also came in contact with her. Areas, where she stayed and villages she visited, have been sealed down.

### Two discharged

Two people from Kolar and Bangarpet were discharged after they fully recovered from Covid-19 at the district S N R Hospital. At present, Kolar has the highest number of patients with 11, followed by Srinivaspur (6), Bangarpet (4), Malur, Mulbagal and KGF (one each).

ಕೋಲಾರ ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯ ನಿದ್ದೆಗೆಡಿಸಿದ ಪ್ರಕರಣಗಳು: ಹೆಚ್ಚಿದ ಆತಂಕ

# ವೈದ್ಯಕೀಯ ವಿದ್ಯಾರ್ಥಿಗಳು, ನರ್ಸ್‌ಗೆ ಸೋಂಕು

ಪ್ರಜಾವಾಣಿ ವಾರ್ತೆ

**ಮುಖ್ಯಾಂಶಗಳು**

- ದೆಹಲಿಯಿಂದ ಬಂದ ಯುವತಿಗೆ ಸೋಂಕು
- ಸೋಂಕಿತ ಚಾಲಕನಿಂದ ಅತ್ತೆಗೆ ಸೋಂಕು
- ಸೋಂಕಿತರ ಸಂಪರ್ಕಕ್ಕೆ ಬಂದವರ ಕ್ವಾರಂಟೈನ್

ಕೋಲಾರ: ಜಿಲ್ಲೆಯಲ್ಲಿ ಕಳೆದ 24 ತಾಸಿನಲ್ಲಿ ವೈದ್ಯಕೀಯ ವಿದ್ಯಾರ್ಥಿಗಳು ಹಾಗೂ ನರ್ಸ್ ಸೇರಿದಂತೆ 8 ಮಂದಿ ಕೊರೊನಾ ಸೋಂಕಿತರು ಪತ್ತೆಯಾಗಿದ್ದು, ಆರೋಗ್ಯ ಇಲಾಖೆಯ ನಿದ್ದೆಗೆಡಿಸಿದೆ.

ಜಿಲ್ಲಾ ಕೇಂದ್ರದ ಆರ್.ಎಲ್ ಜಾಲಪ್ಪ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಕೊರೊನಾ ಸೋಂಕಿತರಿಗೆ ಚಿಕಿತ್ಸೆ ನೀಡುತ್ತಿದ್ದ ಮೂವರು ವೈದ್ಯಕೀಯ ವಿದ್ಯಾರ್ಥಿಗಳಿಗೆ, ಕ್ಯಾನ್ಸರ್ ರೋಗಿಯೊಬ್ಬರಿಗೆ ಇದೀಗ ಸೋಂಕು ಹರಡಿರುವುದು ಖಚಿತವಾಗಿದೆ.

ಮತ್ತೊಂದೆಡೆ ಎಸ್‌ಎನ್‌ಆರ್ ಜಿಲ್ಲಾ ಆಸ್ಪತ್ರೆಯಲ್ಲಿನ ಕೊರೊನಾ ಸೋಂಕಿತರ ವಾರ್ಡ್‌ನಲ್ಲಿ ಕೆಲಸ ಮಾಡುತ್ತಿದ್ದ ಶ್ರೀನಿವಾಸಪುರ ತಾಲ್ಲೂಕಿನ ಗೊಟ್ಟುಕುಂಟೆ ಗ್ರಾಮದ 26 ವರ್ಷದ ನರ್ಸ್‌ಗೆ ಸೋಂಕು ಇರುವುದು ದೃಢಪಟ್ಟಿದೆ. ಬಂಗಾರಪೇಟೆ ತಾಲ್ಲೂಕಿನಲ್ಲಿ 2 ಕೊರೊನಾ ಸೋಂಕಿನ ಪ್ರಕರಣ ವರದಿಯಾಗಿವೆ. ತಮಿಳುನಾಡಿನ ಕೃಷ್ಣಗಿರಿ ಜಿಲ್ಲೆಯಿಂದ ಬಂಗಾರಪೇಟೆ ತಾಲ್ಲೂಕಿನ ಬನಹಳ್ಳಿಯಲ್ಲಿರುವ ತವರು ಮನೆಗೆ ಬಂದಿದ್ದ 20 ವರ್ಷದ ಮಹಿಳೆಗೆ ಸೋಂಕು ಇರುವುದು ದೃಢಪಟ್ಟಿದೆ. ಪತಿಯ ಜತೆ ಕೃಷ್ಣಗಿರಿ ಜಿಲ್ಲೆಯಲ್ಲಿ ವಾಸವಾಗಿದ್ದ ಇವರು ಜೂನ್ 15ರಂದು ಬನಹಳ್ಳಿಗೆ ಬಂದಿದ್ದರು.

ಇವರ ಪ್ರಯೋಗಾಲಯದ ವರದಿ ಬರುವ ಮುನ್ನವೇ ಇವರು ಜೂನ್ 16ರಂದು ಕೃಷ್ಣಗಿರಿ ಜಿಲ್ಲೆಯಲ್ಲಿನ ಪತಿಯ ಮನೆಗೆ ಮರಳಿದ್ದಾರೆ. ಇವರ ಸಂಪರ್ಕಕ್ಕೆ ಬಂದಿರುವ ಕುಟುಂಬದ 10ಕ್ಕೂ ಹೆಚ್ಚು ಮಂದಿಯನ್ನು ಕ್ವಾರಂಟೈನ್ ಮಾಡಲಾಗಿದೆ.

ಜಿಲ್ಲಾ ಕೇಂದ್ರದಲ್ಲಿನ ಲೋಕೋಪಯೋಗಿ ಇಲಾಖೆ ವಸತಿ ಸಮುಚ್ಚಯದಲ್ಲಿ ಜೂನ್ 14ರಂದು ಪತ್ತೆಯಾಗಿದ್ದ ಕೊರೊನಾ ಸೋಂಕಿತ ಚಾಲಕನ ಪ್ರಾಥಮಿಕ ಸಂಪರ್ಕದಿಂದ ಬಂಗಾರಪೇಟೆ ತಾಲ್ಲೂಕಿನ ಕುಪ್ಪನಹಳ್ಳಿಯಲ್ಲಿನ ಅವರ ಅತ್ತೆಗೆ ಸೋಂಕು ತಗುಲಿದೆ.

**ಯುವತಿಗೆ ಸೋಂಕು:** ಕೆಜಿಎಫ್ ತಾಲ್ಲೂಕಿನ ತೂಕಲ್ ರಾಮಪುರ ಗ್ರಾಮಕ್ಕೆ ಇತ್ತೀಚೆಗೆ ದೆಹಲಿಯಿಂದ ಬಂದಿದ್ದ 25 ವರ್ಷದ ಯುವತಿಗೆ ಸೋಂಕು ತಗುಲಿದೆ. ಇವರು ತೂಕಲ್ ರಾಮಪುರಕ್ಕೆ ಬಂದ ನಂತರ ಸಂಬಂಧಿಕರೊಬ್ಬರು ಮದುವೆಯಲ್ಲಿ ಭಾಗಿಯಾಗಿ ಹಲವರ ಸಂಪರ್ಕಕ್ಕೆ ಬಂದಿದ್ದರು. ಅಲ್ಲದೇ, ಗ್ರಾಮದ ಹಲವರು ಇವರ ಸಂಪರ್ಕಕ್ಕೆ ಬಂದಿರುವುದು ಆರೋಗ್ಯ ಇಲಾಖೆಯ ಪರಿಶೀಲನೆಯಿಂದ ಗೊತ್ತಾಗಿದೆ. ಸೋಂಕಿತರು ಪತ್ತೆಯಾಗಿರುವ ಬಡಾವಣೆ ಹಾಗೂ ಗ್ರಾಮಗಳನ್ನು ಸೀಲ್‌ಡೌನ್ ಮಾಡಲಾಗಿದೆ.



ಬಂಗಾರಪೇಟೆ ತಾಲ್ಲೂಕಿನ ಬನಹಳ್ಳಿಯಲ್ಲಿ ಶುಕ್ರವಾರ ಕೊರೊನಾ ಸೋಂಕಿತ ಮಹಿಳೆಯ ಸಂಪರ್ಕಕ್ಕೆ ಬಂದವರ ಆರೋಗ್ಯ ತಪಾಸಣೆ ಮಾಡಲಾಯಿತು

## ಸೋಂಕಿತರ ಸಂಖ್ಯೆ 25ಕ್ಕೆ ಏರಿಕೆ

ಜಿಲ್ಲೆಯ ಕೋಲಾರ ಹಾಗೂ ಬಂಗಾರಪೇಟೆ ತಾಲ್ಲೂಕಿನ ಇಬ್ಬರು ಕೊರೊನಾ ಸೋಂಕಿತರು ಗುಣಮುಖರಾಗಿ ಎಸ್‌ಎನ್‌ಆರ್ ಆಸ್ಪತ್ರೆಯಿಂದ ಶುಕ್ರವಾರ ಮನೆಗೆ ಮರಳಿದರು. ಇದರೊಂದಿಗೆ ಜಿಲ್ಲೆಯಲ್ಲಿ ಸದ್ಯ ಸೋಂಕಿತರ ಸಂಖ್ಯೆ 25ಕ್ಕೆ ತಲುಪಿದೆ. ಕೋಲಾರ ತಾಲ್ಲೂಕಿನಲ್ಲಿ ಅತಿ ಹೆಚ್ಚು 11 ಮಂದಿ ಸೋಂಕಿತರಿದ್ದಾರೆ. ಉಳಿದಂತೆ ಶ್ರೀನಿವಾಸಪುರ ತಾಲ್ಲೂಕಿನಲ್ಲಿ 6, ಬಂಗಾರಪೇಟೆ 4, ಮಾಲೂರು ಮತ್ತು ಮುಳಬಾಗಿಲು ತಾಲ್ಲೂಕಿನಲ್ಲಿ ತಲಾ 1 ಹಾಗೂ ಕೆಜಿಎಫ್ ತಾಲ್ಲೂಕಿನಲ್ಲಿ ಇಬ್ಬರು ಸೋಂಕಿತರಿದ್ದಾರೆ.

# 50ರ ಗಡಿ ದಾಟಿದ ಸೋಂಕಿತರ ಸಂಖ್ಯೆ

## ಕ್ಯಾನ್ಸರ್ ರೋಗಿ ಸೇರಿ ಒಂದೇ ದಿನ ನಾಲ್ವರಿಗೆ ಸೋಂಕು | ಮೂವರು ವೈದ್ಯರು ಕ್ವಾರಂಟೈನ್

**ಕೋಲಾರ:** ಜಿಲ್ಲೆಯಲ್ಲಿ ಒಂದೇ ದಿನ ನಾಲ್ವರಲ್ಲಿ ಕೊರೊನಾ ಸೋಂಕು ದೃಢಪಟ್ಟಿದ್ದು, ಸೋಂಕಿತರ ಸಂಖ್ಯೆ ಐವತ್ತರ ಗಡಿ ದಾಟಿ ಐವತ್ತೆರಡು ತಲುಪಿದೆ.

ಜಿಲ್ಲೆಯಲ್ಲಿ ಶುಕ್ರವಾರ ನಾಲ್ವರು ಮಹಿಳೆಯರು ಹಾಗೂ ಒಬ್ಬ ಪುರುಷನಲ್ಲಿ ಕೊರೊನಾ ಸೋಂಕು ಪತ್ತೆಯಾಗಿ ಆತಂಕ ಮೂಡಿಸಿದೆ. ಕೋಲಾರ ಹಾಗೂ ಶ್ರೀನಿವಾಸಪುರ ತಾಲೂಕಿನ ತಲಾ ಒಬ್ಬರು, ಬಂಗಾರಪೇಟೆ ತಾಲೂಕಿನ ಇಬ್ಬರಿಗೆ ಕೊರೊನಾ ಸೋಂಕು ತಗುಲಿದೆ.

ಜಿಲ್ಲೆಯ ಒಟ್ಟು ಪ್ರಕರಣಗಳು 52, ಗುಣಮುಖರಾಗಿರುವವರು 29 ಹಾಗೂ ಸಕ್ರಿಯ ಪ್ರಕರಣಗಳು 23 ಆಗಿದೆ. ಶ್ರೀನಿವಾಸಪುರದ 26 ವರ್ಷದ ಮಹಿಳೆ ಪಿ.6907 ಸೋಂಕಿತರ ಪ್ರಾಥಮಿಕ ಸಂಪರ್ಕ ಹೊಂದಿದ್ದು, ಇದೀಗ ಸೋಂಕು ಪೀಡಿತರಾಗಿದ್ದಾರೆ.

ಕೋಲಾರ ತಾಲೂಕಿನ ಜಂಗಮ ಗುರ್ಜೇನಹಳ್ಳಿಯ 50 ವರ್ಷ ಮಹಿಳೆಯಲ್ಲಿ ಕೊರೊನಾ ಸೋಂಕು ಪತ್ತೆಯಾಗಿದ್ದು, ಸೋಂಕಿನ ಇತಿಹಾಸ ತನಿಖೆ ಮಾಡಲಾಗುತ್ತಿದೆ. ಬಂಗಾರಪೇಟೆ ತಾಲೂಕಿನ ಬನಹಳ್ಳಿ ಗ್ರಾಮದ 20 ವರ್ಷದ ಮಹಿಳೆಯಲ್ಲಿ ಸೋಂಕು ದೃಢಪಟ್ಟಿದೆ. ಚೆನ್ನೈಗೆ ಹೋಗಿ ಬಂದಿದ್ದ ಮಹಿಳೆಗೆ ಸೋಂಕು ತಗುಲಿದೆ.

ಬೆಂ.ಗ್ರಾ.ಜಿಲ್ಲೆಯಿಂದ ಬಂದಿದ್ದ 65 ವರ್ಷದ ಮತ್ತೊರ್ವ ವ್ಯಕ್ತಿಯಲ್ಲಿ ಕೊರೊನಾ ಸೋಂಕು ಕಂಡುಬಂದಿದೆ. ಸದ್ಯ ಸೋಂಕಿತರು ಕೋವಿಡ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ಇದರಿಂದಾಗಿ ಕೋಲಾರದಲ್ಲಿ ಸೋಂಕಿತರ ಸಂಖ್ಯೆ 52ಕ್ಕೇರಿದೆ.

**ಜಾಲಪ್ಪ ಆಸ್ಪತ್ರೆಗೆ ಆತಂಕ:** ಕೋಲಾರದ ಮೆಡಿಕಲ್ ಕಾಲೇಜಿನಲ್ಲಿ ಕೊರೊನಾ ವೈದ್ಯರು ಹಾಗೂ ಆರೋಗ್ಯ ಸಿಬ್ಬಂದಿಯಲ್ಲಿ ಭೀತಿಯನ್ನುಂಟು ಮಾಡಿದೆ. ಜೂ.16 ರಂದು ಮಹಿಳೆಯೊಬ್ಬರಿಗೆ ಕೊರೊನಾ ತಪಾಸಣೆ ಮಾಡದೆ ಕ್ಯಾನ್ಸರ್‌ಗೆ ಸರ್ಜರಿ ಮಾಡಲಾಗಿದೆ. ಶಸ್ತ್ರಚಿಕಿತ್ಸೆ ಬಳಿಕ ರೋಗಿಯಲ್ಲಿ ಕೊರೊನಾ ಪತ್ತೆಯಾಗಿದ್ದು, ಸರ್ಜರಿ ಮಾಡಿದ ವೈದ್ಯರು, ಸಿಬ್ಬಂದಿ ಕ್ವಾರಂಟೈನ್‌ಗೊಳಗಾಗುವಂತಾಗಿದೆ. ಮೂವರು ವೈದ್ಯರನ್ನು ಆಸ್ಪತ್ರೆಯಲ್ಲಿನ ಪ್ರತ್ಯೇಕ ನಿಗಾಘಟಕಕ್ಕೆ ದಾಖಲಿಸಲಾಗಿದೆ.

ಈ ಪ್ರಕರಣದಿಂದ ಮೂವರು ವೈದ್ಯರಲ್ಲಿ ಹಾಗೂ ಪಿಜಿ ವೈದ್ಯರಿದ್ದ ಹಾಸ್ಟೆಲ್ ಸಹಪಾಠಿಗಳಿಗೂ ಹಾಗೂ ಕ್ಯಾನ್ಸರ್ ರೋಗಿ ದಾಖಲಾಗಿದ್ದ ವಾರ್ಡ್‌ನ ಇತರೇ ರೋಗಿಗಳಿಗೂ ಕೊರೊನಾ ಪರೀಕ್ಷೆ ಮಾಡಿಸಲಾಗುತ್ತಿದೆ.

ಮುಂಜಾಗ್ರತ ಕ್ರಮವಾಗಿ 3 ಜನ ವೈದ್ಯರು ಸೇರಿ 20ಕ್ಕೂ ಹೆಚ್ಚು ಜನ ಕ್ವಾರಂಟೈನ್‌ಗೊಳಗಾಗಿದ್ದಾರೆ. ಮೂವರು ವೈದ್ಯರಿಗೆ ಕೊರೊನಾ ಲಕ್ಷಣಗಳು ಕಂಡು ಬಂದಿವೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ.

## ಬಂಗಾರಪೇಟೆ: ಮತ್ತೆರಡು ಕೊರೊನಾ ಸೋಂಕು ಪತ್ತೆ

**ಬಂಗಾರಪೇಟೆ:** ತಾಲೂಕಿನ ಬನಹಳ್ಳಿ ಮತ್ತು ಕುಪ್ಪನಹಳ್ಳಿ ಗ್ರಾಮಗಳಲ್ಲಿ ಕೊರೊನಾ ಸೋಂಕು ಕಾಣಿಸಿಕೊಂಡಿದ್ದು, ಗ್ರಾಮಸ್ಥರಲ್ಲಿ ಆತಂಕ ಸೃಷ್ಟಿಸಿದೆ. ತಮಿಳುನಾಡಿನಿಂದ ಬಂದಿದ್ದ ಬನಹಳ್ಳಿಯ ಮಹಿಳೆಗೆ ಹಾಗೂ ಕುಪ್ಪನಹಳ್ಳಿ ಗ್ರಾಮದ ಸೋಂಕಿತನ ಅತ್ತೆಗೆ ಕೊರೊನಾ ಪಾಸಿಟಿವ್ ಬಂದಿದೆ. ತಮಿಳುನಾಡು ಕೃಷ್ಣಗಿರಿಯ ಗ್ರಾಮವೊಂದರಿಂದ ತವರು ಮನೆಗೆ ಬಂದಿದ್ದ ಬನಹಳ್ಳಿಯ ಮಹಿಳೆ ಅಸ್ತಮಾ ಕಾಯಿಲೆಯಿಂದ ಬಳಲುತ್ತಿದ್ದರು.

ಬಂಗಾರಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ವೇಳೆ ಕೊರೊನಾ ದೃಢಪಟ್ಟಿದೆ. ಕುಪ್ಪನಹಳ್ಳಿಯ ಸೋಂಕಿತ ಚಾಲಕನಿಂದ ಆತನ ಅತ್ತೆಗೂ ಶುಕ್ರವಾರ ಕೊರೊನಾ ಬಂದಿದೆ. ಪಾಸಿಟಿವ್ ಬಂದಿರುವ ಹಿನ್ನೆಲೆಯಲ್ಲಿ ಕುಪ್ಪನಹಳ್ಳಿ ಹಾಗೂ ಬೂದಿಕೋಟೆ ಹೋಬಳಿಯ ಬನಹಳ್ಳಿ ಗ್ರಾಮಗಳನ್ನು ಸೀಲ್‌ಡೌನ್ ಮಾಡಲಾಗಿದೆ.

ಈ ಗ್ರಾಮದಿಂದ ಯಾರೂ ಹೊರಗೆ ಹೋಗದಂತೆ ಮತ್ತು ಒಳಗೆ ಬರದಂತೆ ಕ್ರಮ ವಹಿಸಲಾಗಿದೆ. ಆ ಗ್ರಾಮಗಳಲ್ಲಿ ಮಾಸ್ಕ್, ಸ್ಯಾನಿಟೈಸರ್ ಮತ್ತು ಸಾಮಾಜಿಕ ಅಂತರದ ಬಗ್ಗೆ ಆಲಂಬಾಡಿ ಜ್ಯೋತೇನಹಳ್ಳಿ ಗ್ರಾಪಂ ಅಧಿಕಾರಿಗಳು ಅರಿವು ಮೂಡಿಸುತ್ತಿದ್ದಾರೆ.



ತಾಲೂಕಿನ ಬನಹಳ್ಳಿ ಗ್ರಾಮದಲ್ಲಿ ಕೊರೊನಾ ಸೋಂಕು ಕಾಣಿಸಿಕೊಂಡಿದ್ದರಿಂದ ತಹಶೀಲ್ದಾರ್ ಕೆ.ಬಿ. ಚಂದ್ರಮೌಳೇಶ್ವರ್ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಸ್ಥಳಕ್ಕೆ ತಹಶೀಲ್ದಾರ್ ಕೆ.ಬಿ.ಚಂದ್ರಮೌಳೇಶ್ವರ್, ತಾಪಂ ಇಒ ಎನ್. ವೆಂಕಟೇಶಪ್ಪ, ಸರ್ಕಲ್ ಇನ್ಸ್‌ಪೆಕ್ಟರ್ ಬಿ.ಎಂ.ಶ್ರೀಕಂಠಯ್ಯ, ಪಿಡಿಒ ಗಂಗೋಜಿರಾವ್ ಮುಂತಾದವರು ಭೇಟಿ ನೀಡಿ ಪರಿಶೀಲನೆ ಮಾಡಿದರು.

ವಿಜಯವಾಣಿ



# ನಾಲ್ವರು ಮಹಿಳೆಯರಿಗೆ ಕರೊನಾ

## ಜಿಲ್ಲೆಯಲ್ಲಿ ಸೋಂಕಿತರ ಸಂಖ್ಯೆ 52ಕ್ಕೆ ಏರಿಕೆ | ಮೃತ ವ್ಯಕ್ತಿಯ ಗಂಟಲು ದ್ರವ ಪರೀಕ್ಷೆಗೆ

■ ವಿಜಯವಾಣಿ ಸುದ್ದಿಜಾಲ ಕೋಲಾರ

ಜಿಲ್ಲೆಯಲ್ಲಿ ಶುಕ್ರವಾರ ನಾಲ್ವರು ಮಹಿಳೆಯರಿಗೆ ಕರೊನಾ ದೃಢಪಟ್ಟಿದ್ದು, ಸೋಂಕಿತರ ಸಂಖ್ಯೆ 52ಕ್ಕೇರಿದೆ.

ಕೋಲಾರದ ಪಿ.6907 ಪ್ರಾಥಮಿಕ ಸಂಪರ್ಕ ಹೊಂದಿದ್ದ ನರ್ಸ್‌ಗೆ (26) ಸೋಂಕು ದೃಢಪಟ್ಟಿದೆ. ಈಕೆ ಶ್ರೀನಿವಾಸಪುರ ತಾಲೂಕಿನ ಗೊಟ್ಟುಕುಂಟೆ ಗ್ರಾಮದ ನಿವಾಸಿಯಾಗಿದ್ದು, ಎಸ್ಸೆನ್ನಾರ್ ಜಿಲ್ಲಾಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು. ನಾಲ್ಕು ದಿನಗಳಿಂದ ಕ್ವಾರಂಟೈನ್ ನಲ್ಲಿದ್ದರು. ಗುರುವಾರ ರಾತ್ರಿ ಸೋಂಕು ದೃಢಪಟ್ಟಿದ್ದು, ಕೋವಿಡ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ನರ್ಸ್ ಗೊಟ್ಟುಕುಂಟೆ ಗ್ರಾಮಕ್ಕೆ ಒಮ್ಮೆ ಬಂದು ಹೋಗಿರುವ ಹಿನ್ನೆಲೆಯಲ್ಲಿ ಗ್ರಾಮವನ್ನು ಸೀಲ್‌ಡೌನ್ ಮಾಡಲಾಗಿದೆ.

ನಗರದ ಆರ್.ಎಲ್. ಜಾಲಪ್ಪ ಆಸ್ಪತ್ರೆಗೆ ದಾಖಲಾಗಿದ್ದ ಕ್ಯಾನ್ಸರ್ ಪೀಡಿತೆಗೆ (50) ಕರೊನಾ ದೃಢಪಟ್ಟಿದ್ದು, ಕೋವಿಡ್ ವಾರ್ಡ್‌ನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಈಕೆಗೆ ಸೋಂಕು ಎಲ್ಲಿಂದ ಹರಡಿತು ಎಂಬುದನ್ನು ಪತ್ತೆಹಚ್ಚಲಾಗುತ್ತಿದೆ.

ಬಂಗಾರಪೇಟೆ ತಾಲೂಕಿನ ಬನಹಳ್ಳಿಯ 20 ವರ್ಷದ ಮಹಿಳೆಗೆ ಸೋಂಕು ದೃಢಪಟ್ಟಿದ್ದು, ಚೆನ್ನೈಗೆ ಹೋಗಿ ಬಂದಿದ್ದರು.

ಮತ್ತೊಂದು ಪ್ರಕರಣದಲ್ಲಿ ಬಂಗಾರಪೇಟೆಯ ರೋಗಿ ಪಿ-6908ರ ಸಂಪರ್ಕದಿಂದ ಒಬ್ಬರಿಗೆ ಸೋಂಕು ದೃಢಪಟ್ಟಿದ್ದು, ಎಸ್ಸೆನ್ನಾರ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ನಾಲ್ವರು ಸೋಂಕಿತ ಮಹಿಳೆಯರ ಪ್ರಥಮ ಸಂಪರ್ಕದಲ್ಲಿದ್ದ 24 ಮಂದಿ ಹಾಗೂ ದ್ವಿತೀಯ ಸಂಪರ್ಕದಲ್ಲಿದ್ದ 22 ಮಂದಿ ಸೇರಿ ಒಟ್ಟು 46 ಜನರನ್ನು ಕ್ವಾರಂಟೈನ್ ಮಾಡಲಾಗಿದೆ.

ಜಿಲ್ಲೆಯಲ್ಲಿ ಒಟ್ಟು ಸೋಂಕಿತರ ಸಂಖ್ಯೆ 52ಕ್ಕೆ ಏರಿದೆ. 29 ಮಂದಿ ಗುಣವಾಗಿ ಬಿಡುಗಡೆ ಹೊಂದಿದ್ದು, 23 ಸಕ್ರಿಯ ಪ್ರಕರಣಗಳಿವೆ. ಒಟ್ಟು 1012 ಮಂದಿ ನಿಗಾದಲ್ಲಿದ್ದಾರೆ. 9340 ಮಾದರಿ ಪರೀಕ್ಷಿಸಲಾಗಿದ್ದು, 8987 ಪ್ರಕರಣಗಳು ನೆಗೆಟಿವ್ ಆಗಿವೆ.



ವಿಜಯವಾಣಿ ಚಿತ್ರ

ಸೀಲ್‌ಡೌನ್ ಮಾಡಿದ ಬೂದಿಕೋಟೆ ಹೋಬಳಿಯ ಬನಹಳ್ಳಿಗೆ ಇಒ ವೆಂಕಟೇಶಪ್ಪ ಭೇಟಿ ನೀಡಿ ಪರಿಶೀಲಿಸಿದರು. ಆರಕ್ಷಕ ನಿರೀಕ್ಷಕ ಶ್ರೀಕಂಠಯ್ಯ, ತಾಲೂಕು ಆರೋಗ್ಯ ನಿರೀಕ್ಷಕರಾದ ಡಾ.ಸುನೀಲ್, ಡಿಎಲ್ಒ ಡಾ.ನಾರಾಯಣಸ್ವಾಮಿ, ಡಾ.ಪುಣ್ಯಮೂರ್ತಿ, ಡಾ.ಪ್ರತೀಕ್ ಎನ್ ಸ್ವಾಮಿ, ಪಿಡಿಒ ಗಂಗೋಜಿರಾವ್ ಇತರರು ಇದ್ದರು.




> ನಮ್ಮ ಆಸ್ಪತ್ರೆಯಲ್ಲಿ 15 ಆಪರೇಷನ್ ಥಿಯೇಟರ್‌ಗಳಿದ್ದು, ರೋಗಿಗಳಿಗೆ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ. ಕ್ಯಾನ್ಸರ್ ಚಿಕಿತ್ಸೆಗೆ ದಾಖಲಾಗಿದ್ದ ಮಹಿಳೆಗೆ ಸರ್ಜರಿ ನಂತರ ಸೋಂಕು ಪತ್ತೆಯಾಗಿದ್ದು ಕೋವಿಡ್ ವಾರ್ಡಿನಲ್ಲಿ ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ. ಜನರಲ್ಲಿ ಅನಗತ್ಯ ಗೊಂದಲ, ಭಯ ಬೇಡ.
>
> | ಡಾ.ಲಕ್ಷ್ಮಯ್ಯ ವೈದ್ಯಕೀಯ ಅಧೀಕ್ಷಕ, ಆರ್.ಎಲ್.ಜಾಲಪ್ಪ ಆಸ್ಪತ್ರೆ, ಕೋಲಾರ

**ವೈದ್ಯ ಸಿಬ್ಬಂದಿ ಕ್ವಾರಂಟೈನ್:** ಕೋಲಾರ ನಗರದ ಹೊರ ವಲಯದ ಆರ್.ಎಲ್.ಜಾಲಪ್ಪ ಆಸ್ಪತ್ರೆಗೆ ದಾಖಲಾಗಿದ್ದ ಕ್ಯಾನ್ಸರ್ ಪೀಡಿತ ರೋಗಿಯಲ್ಲಿ ಕರೊನಾ ಪತ್ತೆಯಾಗಿದ್ದು ಈಕೆಗೆ ಚಿಕಿತ್ಸೆ ನೀಡಿದ ವೈದ್ಯರು ಮತ್ತು ಸಿಬ್ಬಂದಿಯನ್ನು ಕ್ವಾರಂಟೈನ್ ಮಾಡಲಾಗಿದೆ. ಕೋಲಾರ ತಾಲೂಕಿನ ಜಂಗಮ ಗುರ್ಜೇನಹಳ್ಳಿಯ ಮಹಿಳೆ ಕ್ಯಾನ್ಸರ್‌ಗೆ ಚಿಕಿತ್ಸೆ ಪಡೆಯಲು ಆಸ್ಪತ್ರೆಗೆ ದಾಖಲಾಗಿ ಸರ್ಜರಿಗೆ ಒಳಪಟ್ಟಿದ್ದರು. ಸರ್ಜರಿ ನಂತರ ಸೋಂಕು ದೃಢಪಟ್ಟಿರುವುದರಿಂದ ಅದೇ ಆಸ್ಪತ್ರೆಯ ಕೋವಿಡ್ ವಾರ್ಡ್‌ಗೆ ದಾಖಲಿಸಿ ಚಿಕಿತ್ಸೆ ಮುಂದುವರಿಸಲಾಗಿದೆ. ಮುಂಜಾಗ್ರತಾ ಕ್ರಮವಾಗಿ ರೋಗಿಗೆ ಚಿಕಿತ್ಸೆ ನೀಡಿದ ವೈದ್ಯರು ಮತ್ತು ಸಿಬ್ಬಂದಿಯನ್ನು ಕ್ವಾರಂಟೈನ್ ಮಾಡಿ ಗಂಟಲು ದ್ರವ ಪರೀಕ್ಷೆಗೆ ಕಳುಹಿಸಲಾಗಿದೆ, ಜತೆಗೆ ಸರ್ಜರಿ ಮಾಡಿದ ಆಪರೇಷನ್ ಥಿಯೇಟರ್ ಅನ್ನು 48 ಗಂಟೆ ಸೀಲ್‌ಡೌನ್ ಮಾಡಿ ಸೋಂಕು ನಿವಾರಕ ಸಿಂಪಡಣೆ ಮಾಡಲಾಗಿದೆ.

**ಅನಾರೋಗ್ಯದಿಂದ ಬಸ್ ಚಾಲಕ ಸಾವು:** ಮಾಲೂರು ಪಟ್ಟಣದ ಆರ್.ಎಫ್. ರಸ್ತೆಯ ನಿವಾಸಿ, ಕೆಎಸ್‌ಆರ್ ಟಿಸಿಯ ಕೋಲಾರ ವಿಭಾಗದಲ್ಲಿ ಚಾಲಕ ಕಂ ನಿರ್ವಾಹಕ ಅನಾರೋಗ್ಯದಿಂದ ಮನೆಯಲ್ಲಿ ಮೃತಪಟ್ಟಿದ್ದು, ಆರೋಗ್ಯ ಇಲಾಖೆಯಿಂದ ಗಂಟಲು ದ್ರವ ಸಂಗ್ರಹಿಸಿ ಕರೊನಾ ಪರೀಕ್ಷೆಗೆ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ. ಗದಗ ಮೂಲದ ಯಲ್ಲಪ್ಪ ಶೆಟ್ಟಿವಾಡಿ (38) ಮೃತ. ಇವರು ಆರ್.ಎಫ್ ರಸ್ತೆಯ ವೇಣುಗೋಪಾಲಸ್ವಾಮಿ ದೇವಾಲಯದ ಬಳಿ ಮನೆಯೊಂದರಲ್ಲಿ ವಾಸವಿದ್ದರು. ವಾರದಿಂದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಮನೆಯಲ್ಲೇ ಇದ್ದರು. ಶುಕ್ರವಾರ ಬೆಳಗ್ಗೆ ಜ್ವರ, ಎದೆನೋವು ಕಾಣಿಸಿಕೊಂಡು ನಿಧನರಾಗಿದ್ದಾರೆ. ಆರೋಗ್ಯ ಇಲಾಖೆ ಸಿಬ್ಬಂದಿ ಮೃತರ ಮನೆಗೆ ಧಾವಿಸಿ ಶವವನ್ನು ಪಟ್ಟಣದ ಶವಾಗಾರದಲ್ಲಿರಿಸಿದ್ದು, ಗಂಟಲು ದ್ರವ ಸಂಗ್ರಹಿಸಿ ಕೋವಿಡ್ ಪರೀಕ್ಷೆಗೆ ಕಳುಹಿಸಿದ್ದಾರೆ.

# ಕೋಲಾರ: ಎಂಟು ಪಾಸಿಟಿವ್ ಪ್ರಕರಣ

## 3 ವೈದ್ಯಕೀಯ ವಿದ್ಯಾರ್ಥಿಗಳು, ನರ್ಸ್‌ಗೂ ಸೋಂಕು: ಜಿಲ್ಲಾಡಳಿತ ಆತಂಕ

ಕೋಲಾರ: ಜಿಲ್ಲೆಯಲ್ಲಿ ಶುಕ್ರವಾರ 8 ಮಂದಿ ಕೊರೊನಾ ಸೋಂಕಿತರು ಪತ್ತೆಯಾಗಿದ್ದು ಇದರಲ್ಲಿ ವೈದ್ಯಕೀಯ ವಿದ್ಯಾರ್ಥಿಗಳು, ನರ್ಸ್ ಗೂ ಕೊರೊನಾ ಸೋಂಕು ಹರಡಿದ್ದು ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆಯ ನಿದ್ದೆಗೆಡಿಸಿದೆ.

ಜಿಲ್ಲಾ ಕೇಂದ್ರದ ಆರ್.ಎಲ್ ಜಾಲಪ್ಪ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಕೊರೊನಾ ಸೋಂಕಿತರಿಗೆ ಚಿಕಿತ್ಸೆ ನೀಡುತ್ತಿದ್ದ ಮೂವರು ವೈದ್ಯಕೀಯ ವಿದ್ಯಾರ್ಥಿಗಳಿಗೆ ಇದೀಗ ಸೋಂಕು ಹರಡಿರುವುದು ಖಚಿತವಾಗಿದೆ.

**ಸರ್ಕಾರಿ ಆಸ್ಪತ್ರೆ ನರ್ಸ್‌ಗೆ ಸೋಂಕು:** ಮತ್ತೊಂದೆಡೆ ಎಸ್‌ಎನ್ ಆರ್ ಜಿಲ್ಲಾ ಆಸ್ಪತ್ರೆಯಲ್ಲಿನ ಕೊರೊನಾ ಸೋಂಕಿತರ ವಾರ್ಡ್‌ನಲ್ಲಿ ಕೆಲಸ ಮಾಡುತ್ತಿದ್ದ ಶ್ರೀನಿವಾಸಪುರ ತಾಲ್ಲೂಕಿನ ಗೂಟ್ಟಕುಂಟೆ ಗ್ರಾಮದ 26 ವರ್ಷದ ನರ್ಸ್‌ಗೆ ಸೋಂಕು ಇರುವುದು ದೃಢಪಟ್ಟಿದೆ. ಇವರು ಎಸ್‌ಎನ್‌ಆರ್ ಆಸ್ಪತ್ರೆಗೆ ದಾಖಲಾಗಿರುವ ನಗರದ ಶಹಿನ್‌ಷಾನಗರ ಬಡಾವಣೆಯ ಸೋಂಕಿತ ಆಟೊ ಚಾಲಕರೊಬ್ಬರಿಗೆ ಚಿಕಿತ್ಸೆ ನೀಡಿದ್ದರು.

ಜಾಲಪ್ಪ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ತಾಲ್ಲೂಕಿನ ಜಂಗಮ ಗುರ್ಜೇನಹಳ್ಳಿಯ ಕ್ಯಾನ್ಸರ್ ರೋಗಿಯೊಬ್ಬರಿಗೆ ಕೊರೊನಾ ಸೋಂಕು ಇರುವುದು ಗೊತ್ತಾಗಿದೆ. ಇವರಿಗೆ ಹೇಗೆ ಸೋಂಕು ತಗುಲಿತು ಎಂಬ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ.

**ಬಂಗಾರಪೇಟೆಯಲ್ಲಿ ಇಬ್ಬರಿಗೆ ಸೋಂಕು:** ಬಂಗಾರಪೇಟೆ ತಾಲ್ಲೂಕಿನಲ್ಲಿ 2 ಕೊರೊನಾ ಸೋಂಕಿನ ಪ್ರಕರಣ ವರದಿಯಾಗಿವೆ. ಕೃಷ್ಣಗಿರಿ ಜಿಲ್ಲೆಯಿಂದ ಬಂಗಾರಪೇಟೆ ತಾಲ್ಲೂಕಿನ ಬನಹಳ್ಳಿಯಲ್ಲಿರುವ ತವರಿಗೆ ಬಂದಿದ್ದ ಮಹಿಳೆಗೆ ಸೋಂಕು ಇರುವುದು ದೃಢಪಟ್ಟಿದೆ. ಇವರು ಜೂನ್ 15ರಂದು ಬನಹಳ್ಳಿಗೆ ಬಂದಿದ್ದರು. ಹೀಗಾಗಿ ಇವರ ಕಫಾ ಮತ್ತು ರಕ್ತ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ಇವರಿಗೆ ಸೋಂಕು ತಗುಲಿರುವುದಾಗಿ ವರದಿಯಲ್ಲಿ ಹೇಳಲಾಗಿದೆ. ಪ್ರಯೋಗಾಲಯದ ವರದಿ ಬರುವ ಮುನ್ನವೇ ಇವರು ಕೃಷ್ಣಗಿರಿಗೆ ಮರಳಿದ್ದಾರೆ. ಇವರ ಸಂಪರ್ಕಕ್ಕೆ ಬಂದಿರುವ ಕುಟುಂಬದ 10ಕ್ಕೂ ಹೆಚ್ಚು ಮಂದಿಯನ್ನು ಕ್ವಾರಂಟೈನ್ ಮಾಡಲಾಗಿದೆ.

ಕೋಲಾರದ ಪಿಡಬ್ಲ್ಯೂಡಿ ವಸತಿ ಸಮುಚ್ಚಯದಲ್ಲಿ ಪತ್ತೆಯಾಗಿದ್ದ ಸೋಂಕಿತ ಚಾಲಕನ ಪ್ರಾಥಮಿಕ ಸಂಪರ್ಕದಿಂದ ಬಂಗಾರಪೇಟೆ ತಾಲೂಕಿನ ಕುಪ್ಪನಹಳ್ಳಿಯಲ್ಲಿನ ಅವರ ಅತ್ತೆಗೆ ಸೋಂಕು ತಗುಲಿದೆ.